# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಏಕೀಕೃತ ಸಾರ್ವಜನಿಕ ದೂರು ನಿವಾರಣಾ ವ್ಯವಸ್ಥೆಯ (Integrated Public Grievance Redressal System) ತಂತ್ರಾಂಶದಲ್ಲಿ ದೂರು ದಾಖಲಿಸಿಲು ಬಾಪೂಜಿ ಸೇವಾ ಕೇಂದ್ರಗಳನ್ನು ಬಾಪೂಜಿ ಸೇವಾ ಸೌಕರ್ಯ ಮತ್ತು ಕುಂದುಕೊರತೆ ದಾಖಲಾತಿ ಕೇಂದ್ರಗಳನ್ನಾಗಿ ಉನ್ನತೀಕರಣಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/01/ಗ.ಕೋಶ/2016 ದಿನಾಂಕ 27-06-2016
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/01/ಗ.ಕೋಶ /2016 ದಿನಾಂಕ 06-07-2016
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/01/ಗ.ಕೋಶ /2016 ದಿನಾಂಕ 21-07-2016
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/01/ಗ.ಕೋಶ /2016 ದಿನಾಂಕ 12-08-2016
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/09/ಗ.ಕೋಶ /2017 ದಿನಾಂಕ 28-03-2017
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/09/ಗ.ಕೋಶ /2017 ದಿನಾಂಕ 02-01-2018
7. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/07/ಗ.ಕೋಶ /2018 ದಿನಾಂಕ 03-10-2018
8. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/50/ಗ.ಕೋಶ /2019 ದಿನಾಂಕ 18-05-2019
9. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 29 ಪಿಆರ್‌ಜೆ 2020, ದಿನಾಂಕ: 09-08-2021

****

**ಪ್ರಸ್ತಾವನೆ:**

ಗ್ರಾಮೀಣ ಜನತೆಗೆ ಸಾಮಾಜಿಕ, ಶೈಕ್ಷಣಿಕ, ವಾಣಿಜ್ಯ ಹಾಗೂ ಕೃಷಿ ಚಟುವಟಿಕೆಗಳಿಗಾಗಿ ವಿವಿಧ ಇಲಾಖೆಗಳ ಸೇವೆಗಳ ದಾಖಲೆಗಳನ್ನು ತ್ವರಿತವಾಗಿ ಮತ್ತು ಸಮೀಪವಾಗಿ ಒಂದೇ ಸೂರಿನಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಂದಾಯ ಇಲಾಖೆಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ನಿರ್ದೇಶನಾಲಯದ ಹಾಗೂ ಇತರೆ ಇಲಾಖೆಗಳ ಸೇವೆಗಳೊಂದಿಗೆ ಆಧಾರ್ ಸೇವೆಗಳನ್ನು ಗ್ರಾಮ ಪಂಚಾಯತಿಗಳಲ್ಲಿ ನೀಡುವ ಉದ್ದೇಶದಿಂದ ಓದಲಾದ ಕ್ರಮಾಂಕ: 1 ರಿಂದ 8 ಆದೇಶನ್ವಯ ಬಾಪೂಜಿ ಸೇವಾ ಕೇಂದ್ರಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸಲಾಗಿದೆ.

2018-19ನೇ ಸಾಲಿನ ಜುಲೈ ಮಾಹೆಯ ಆಯವ್ಯಯ ಭಾಷಣದಲ್ಲಿನ ಘೋಷಣೆಯನ್ವಯ ರಾಜ್ಯದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಾರ್ವಜನಿಕರು ತಮ್ಮ ಕುಂದುಕೊರತೆ / ದೂರುಗಳನ್ನು ದಾಖಲಿಸಲು ಒಂದು ಸಮಗ್ರವಾದ ಹಾಗೂ ಸದೃಢವಾದ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (iPGRS) ಯ

ತಂತ್ರಾಂಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆಯ ಇ-ಆಡಳಿತ ಕೇಂದ್ರವು ವಿನ್ಯಾಸಗೊಳಿಸಿ, Centre for Smart Governance ನಿಂದ ಅಭಿವೃದ್ಧಿಪಡಿಸಿ ಮೇಲೆ ಓದಲಾದ ಕ್ರಮಾಂಕ (9) ರ ಆದೇಶದಲ್ಲಿ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (iPGRS) ತಂತ್ರಾಂಶದ ಅನುಷ್ಠಾನದ ಮಾರ್ಗಸೂಚಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಹೊರಡಿಸಿದೆ.

ತಮಗೆ ಆಗುತ್ತಿರುವ ತೊಂದರೆಗಳನ್ನು ಕುರಿತು ನಾಗರಿಕರು ದೂರುಗಳನ್ನು ದಾಖಲಿಸಲು ಈಗಾಗಲೇ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (iPGRS) ಯನ್ನು ಅನುಷ್ಠಾನಗೊಳಿಸಿದ್ದು. ಈ ಬಗ್ಗೆ ನಾಗರಿಕರಿಗೆ ಸೂಕ್ತ ಮಾಹಿತಿಯನ್ನು ಹಾಗೂ ದೂರು ದಾಖಲಿಸಲು ಸಾಧ್ಯವಾಗಬಹುದಾದ ಎಲ್ಲಾ ನೆರವನ್ನು ಗ್ರಾಮ ಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ನೀಡಲು ಸರ್ಕಾರವು ನಿರ್ಧರಿಸಿದ್ದು, ಈ ಹಿನ್ನೆಲೆಯಲ್ಲಿ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/86/ಇ-ಆಡಳಿತ/2021, ಬೆಂಗಳೂರು, ದಿನಾಂಕ: 16.09.2021</u>

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿನ ಗ್ರಾಮ ಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಇಲಾಖೆಗಳ ಸೇವೆಗಳನ್ನು ಒದಗಿಸುವುದರೊಂದಿಗೆ, ಇನ್ನು ಮುಂದೆ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಲು ಹಾಗೂ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಸೇವೆಗಳ ಕುರಿತಂತೆ ದೂರುಗಳನ್ನು ದಾಖಲಿಸಲು ನೆರವು ನೀಡಲು ಸೇವಾ ಸೌಕರ್ಯ ಮತ್ತು ಕುಂದುಕೊರತೆ ದಾಖಲಾತಿ / ಕೇಂದ್ರಗಳನ್ನಾಗಿ ಉನ್ನತೀಕರಿಸಿ, ಸದರಿ ಬಾಪೂಜಿ ಸೇವಾ ಕೇಂದ್ರಗಳನ್ನು **"ಬಾಪೂಜಿ ಸೇವಾ ಸೌಕರ್ಯ ಮತ್ತು ಕುಂದುಕೊರತೆ ದಾಖಲಾತಿ ಕೇಂದ್ರಗಳು"** ಎಂದು ಪುನರ್ ನಾಮಕರಣ ಮಾಡಿ ಸರ್ಕಾರವು ಆದೇಶಿಸಿದೆ.

ಸದರಿ **"ಬಾಪೂಜಿ ಸೇವಾ ಸೌಕರ್ಯ ಮತ್ತು ಕುಂದುಕೊರತೆ ದಾಖಲಾತಿ ಕೇಂದ್ರ"** ಗಳು ಈ ಕೆಳಕಂಡ ಜವಾಬ್ದಾರಿಗಳನ್ನು ನಿರ್ವಹಿಸತಕ್ಕದ್ದು:

1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಂದಾಯ ಇಲಾಖೆಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ನಿರ್ದೇಶನಾಲಯದ ಹಾಗೂ ಇತರೆ ಇಲಾಖೆಗಳ ಸೇವೆಗಳೊಂದಿಗೆ ಆಧಾರ್ ಸೇವೆಗಳನ್ನು ಒದಗಿಸುವುದು.

2) ಸರ್ಕಾರದ ವಿವಿಧ ಇಲಾಖೆಗಳ ಯೋಜನೆ/ಸೇವೆಗಳ ಕುರಿತಂತೆ ನಾಗರಿಕರಿಗೆ ಮಾಹಿತಿಯನ್ನು ಒದಗಿಸುವುದು.

3) ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (iPGRS) ತಂತ್ರಾಂಶದಲ್ಲಿ ದೂರು ದಾಖಲಿಸಲು ನಾಗರಿಕರಿಗೆ ನೆರವು ನೀಡುವುದು.

4) ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (iPGRS) ಯ ತಂತ್ರಾಂಶದಲ್ಲಿ ದಾಖಲಾದ ದೂರುಗಳ ವಿಲೇವಾರಿ ಕುರಿತಂತೆ ದೂರು ನಿವಾರಣಾ ಸ್ಥಿತಿಯನ್ನು ನಾಗರಿಕರಿಗೆ ಒದಗಿಸುವುದು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಯು **"ಬಾಪೂಜಿ ಸೇವಾ ಸೌಕರ್ಯ ಮತ್ತು ಕುಂದುಕೊರತೆ ದಾಖಲಾತಿ ಕೇಂದ್ರ"** ಗಳ ಸಿಬ್ಬಂದಿಯವರಿಗೆ ಸೂಕ್ತ ತರಬೇತಿ ನೀಡಲು ಕ್ರಮ ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

18/09/21

(ಶಿಲ್ಪಾ ನಾಗ್)
ನಿರ್ದೇಶಕರು, ಇ-ಆಡಳಿತ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ 50 ಪ್ರತಿಗಳನ್ನು ಈ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿ:

1. ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಇವರ ಆಪ್ತ ಕಾರ್ಯದರ್ಶಿಗಳು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ನಿರ್ದೇಶಕರು, ಪಂಚಾಯತ್ ರಾಜ್-1, ಗ್ರಾಅಪ ಇಲಾಖೆ.
6. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

7. ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ.
8. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.